# ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ ರವರ ನ್ಯಾಯಾಲಯ, ಕೊಳ್ಳೇಗಾಲ

## ಸಿ ಸಿ ಸಂಖ್ಯೆ 2279/2023

ಚಾಸಾ 1 ಪ್ರಾಸಾ 1

| | | |
|---|---|---|
| ಸಾಕ್ಷಿಯ ಹೆಸರು | : | ವಿಜಯರಾಜ್ |
| ತಂದೆಯ ಹೆಸರು | : | ರಾಜಶೇಖರ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಪಿ.ಎಸ್.ಐ, ತಲಕಾಡು ಪೊಲೀಸ್ ಠಾಣೆ |
| ವಾಸ ಸ್ಥಳ | : | ತಲಕಾಡು |

ದಿನಾಂಕ 17.03.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ – ಮಾನ್ಯ ಸಸಅ ರವರಿಂದ

ನಾನು ದಿನಾಂಕ 04.11.2022 ರಿಂದ 05.01.2026 ರವರೆಗೆ ಕೊಳ್ಳೇಗಾಲ ಅರಣ್ಯ ಸಂಚಾರಿ ದಳದಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 23.08.2023 ರಂದು ಬೆಳಿಗ್ಗೆ 10.00 ಗಂಟೆ ಸಮಯದಲ್ಲಿ ಭಾತ್ಮೀದಾರರರಿಂದ ಕೆಎ–10–ಯು–4034 ಹೊಂಡಾ ಶೈನ್ ಮೋಟಾರ್ ಬೈಕ್ ನಲ್ಲಿ ಯಾರೋ ಇಬ್ಬರು ಅಸಾಮಿಗಳು ಒಂದು ಪಾಸ್ಟಿಕ್ ಚೀಲದಲ್ಲಿ ಜಿಂಕೆ ಕೊಂಬುಗಳನ್ನು ಮಾರಾಟ ಮಾಡುವ ಸಲುವಾಗಿ ಸಾಗಾಣಿಕೆ ಮಾಡುತ್ತಿದ್ದಾರೆ ಎಂದು ಭಾತ್ಮೀ ಬಂದಿದ್ದು, ಅದರಂತೆ ನಾವು ಮೇಲಾಧಿಕಾರಿಗಳಿಗೆ ತಿಳಿಸಿ ನಂತರ ಸಿಬ್ಬಂದಿಗಳಾದ ಚಾಸಾ–4 ರಿಂದ 8 ರವರಿಗೆ ಭಾತ್ಮೀಯ ವಿಚಾರವನ್ನು ತಿಳಿಸಿ,ನಂತರ ಚಾಸಾ–4 ರವರ ಮುಖೇನ ಚಾಸಾ–2 ಮತ್ತು 3 ರವರನ್ನು ಪಂಚರಾಗಿ ಕಚೇರಿಗೆ ಬರಮಾಡಿಕೊಂಡು ಸದರಿಯವರಿಗೂ ಭಾತ್ಮೀಯ ವಿಚಾರವನ್ನು ತಿಳಿಸಿ ದಾಳಿಗೆ ಪಂಚರಾಗಲು ಸಹಕರಿಸಬೇಕೆಂದು ಕೋರಿಕೊಂಡ ಮೇರೆಗೆ ಸದರಿಯವರು ಒಪ್ಪಿದ ಮೇರೆಗೆ ಅವರಿಗೆ ನೋಟೀಸ್ ಜಾರಿ ಮಾಡಿರುತ್ತೇವೆ. ನಂತರ ಕಚೇರಿಯಿಂದ ಬೆಳಿಗ್ಗೆ 10.30ರ ಸಮಯದಲ್ಲಿ ಚಾಸಾ–2 ರಿಂದ 8 ರವರೊಂದಿಗೆ ಇಲಾಖಾ ಜೀಪ್ ಸಂಖ್ಯೆ ಕೆಎ–12–ಜಿ–698 ವಾಹನದಲ್ಲಿ ಮಾಹಿತಿ ಬಂದ ಸ್ಥಳವಾದ ಹನೂರು ತಾಲ್ಲೂಕಿನ ಚೆನ್ನಾಲಿಂಗನಹಳ್ಳಿ ಗ್ರಾಮದ ಹೊರ ವಲಯವನ್ನು ಬೆಳಿಗ್ಗೆ 11.30 ರ ಸಮಯಕ್ಕೆ ತಲುಪಿರುತ್ತೇವೆ.

ನಂತರ ಮತ್ತೊಮ್ಮೆ ಭಾತ್ಮೀದಾರರನ್ನು ಸಂಪರ್ಕಿಸಿ ಸದರಿ ಅಸಾಮಿಗಳು ದೊಡ್ಡಮಾಲಾಪುರ ಗ್ರಾಮದಿಂದ ಕೊಳ್ಳೇಗಾಲದ ಕಡೆಗೆ ಬರುತ್ತಿದ್ದಾರೆ ಎಂಬ ಮಾಹಿತಿಯ ಮೇರೆಗೆ ನಾವುಗಳು ಚೆನ್ನಾಲಿಂಗನಹಳ್ಳಿ

ಗ್ರಾಮಕ್ಕೆ ಹೋಗುವ ಅಡ್ಡ ರಸ್ತೆಯ ಬಳಿ ಬಸ್ ನಿಲ್ದಾಣದ ಮುಂಭಾಗ ಇರುವ ಸ್ಪೀಡ್ ಬ್ರೇಕರ್ ಬಳಿ ನಿಂತಿದ್ದು, ಸ್ವಲ್ಪ ಸಮಯದ ನಂತರ ಒಂದು ದ್ವಿಚಕ್ರ ವಾಹನವು ಸದರಿ ರಸ್ತೆಯಲ್ಲಿ ಬರುತ್ತಿದ್ದು, ನಾವುಗಳು ಸುತ್ತುವರೆದು ಸದರಿ ಮೋಟಾರ್ ಬೈಕ್ ನ್ನು ತಡೆದು ನಿಲ್ಲಿಸಿ ಅವರಿಗೆ ನಾವು ಪೊಲೀಸರು ಎಂದು ಪರಿಚಯ ಮಾಡಿಕೊಟ್ಟು ಅವರುಗಳ ಪೈಕಿ ಹಿಂಬದಿಯಲ್ಲಿ ಕುಳಿತಿದ್ದ ವ್ಯಕ್ತಿಯ ಬಳಿ ತಿಳಿ ಹಸಿರು ಬಣ್ಣದ ಪ್ಲಾಸ್ಟಿಕ್ ಚೀಲ ಇದ್ದು, ಅದರೊಳಗೆ ಏನಿದೆ ಎಂದು ಕೇಳಲಾಗಿ, ಸದರಿ ವ್ಯಕ್ತಿಯ ಜಿಂಕೆಯ ಕೊಂಬುಗಳು ಇರುತ್ತವೆ ಎಂದು ತಿಳಿಸಿರುತ್ತಾನೆ. ನಂತರ ಪಂಚರ ಸಮಕ್ಷಮ ಸದರಿ ಚೀಲವನ್ನು ತೆರೆದು ನೋಡಲಾಗಿ, ಜಿಂಕೆಯ ಕೊಂಬುಗಳು ಇರುವುದು ಖಚಿತವಾಗಿರುತ್ತದೆ. ನಂತರ ಸದರಿ ವ್ಯಕ್ತಿಗಳ ಹೆಸರು ಮತ್ತು ವಿಳಾಸ ಕೇಳಲಾಗಿ ಈರಣ್ಣ. ಎಲ್ ಬಿನ್ ಲೇಟ್ ಲಕ್ಷ್ಮಣ, 49 ವರ್ಷ, ಹುಣಸೇಪಾಳ್ಯ ಗ್ರಾಮ ಹಾಗೂ ಮತೊರ್ವ ಆರ್ಯ.ಎಂ ಬಿನ್ ಮಹದೇವ, 22 ವರ್ಷ, ಹುಣಸೇಪಾಳ್ಯ ಗ್ರಾಮ ಎಂದು ತಿಳಿಸಿರುತ್ತಾರೆ. ನಂತರ ಸದರಿ ಜಿಂಕೆಯ ಕೊಂಬುಗಳನ್ನು ಸಾಗಾಣಿಕೆ ಮಾಡಲು ಯಾವುದಾದರೂ ಪರವಾನಿಗೆ ಇರುತ್ತದೆಯೇ ಎಂದು ಕೇಳಲಾಗಿ ಯಾವುದೇ ಪರವಾನಿಗೆಯನ್ನು ಹಾಜರಪಡಿಸದ ಕಾರಣ ಸದರಿ ವ್ಯಕ್ತಿಗಳ ಕೃತ್ಯವು ವನ್ಯಜೀವಿ ಸಂರಕ್ಷಣಾ ಕಾಯ್ದೆ ಅಡಿ ಅಪರಾಧವಾದ್ದರಿಂದ ಪಂಚರ ಸಮಕ್ಷಮ 12 ಒಣಗಿದ ಜಿಂಕೆಯ ಕೊಂಬುಗಳನ್ನು ಹಾಗೂ ಈ ಜಿಂಕೆಯ ಕೊಂಬುಗಳನ್ನು ಸಾಗಾಣಿಕೆ ಮಾಡಲು ಬಳಸಿದ ತಿಳಿ ಹಸಿರು ಬಣ್ಣದ ಪ್ಲಾಸ್ಟಿಕ್ ಚೀಲವನ್ನು ಹಾಗೂ ಕೃತ್ಯಕ್ಕೆ ಬಳಸಿದ ಕೆಎ–10–ಯು–4034 ದ್ವಿಚಕ್ರ ವಾಹನವನ್ನು ಹಾಗೂ ಅಸಾಮಿಗಳನ್ನು ಮಧ್ಯಾಹ್ನ 12.30 ರಿಂದ 1.30 ರ ಸಮಯದಲ್ಲಿ ಅಮಾನತ್ತು ಮಹಜರ್ ಕ್ರಮದ ಮೂಲಕ ಇಲಾಖಾ ವಶಕ್ಕೆ ಪಡೆದುಕೊಂಡಿರುತ್ತೇವೆ. ನಂತರ ಕಚೇರಿಗೆ ಬಂದು ಆರೋಪಿಗಳನ್ನು ವಿಚಾರಣೆ ಮಾಡಿ ಸದರಿಯವರುಗಳ ಹೇಳಿಕೆ ಪಡೆದು ಸದರಿ ಆರೋಪಿಗಳ ವಿರುದ್ಧ WLOR 14/2023 ರಂತೆ ವರದಿ ತಯಾರಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಆರೋಪಿಗಳ ದಸ್ತಗಿರಿ ಕ್ರಮ ಅನುಸರಿಸಿ ನ್ಯಾಯಾಂಗ ಬಂಧನಕ್ಕೆ ನೀಡಿರುತ್ತೇವೆ.

ನಂತರ ಚಾಸಾ–2 ರಿಂದ 8 ರವರುಗಳ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 24.08.2023 ರಂದು ಚಾಸಾ–4 ಮತ್ತು 7 ರವರು ಮೊಬೈಲ್ ನಲ್ಲಿ ತೆಗೆದಿದ್ದ ಫೋಟೋಗಳನ್ನು ಚಾಸಾ–11 ರವರಿಗೆ ನೀಡಿ ಪ್ರಿಂಟ್ ಹಾಕಿಸಿ ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 65 ಬಿ ರಡಿಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ನಂತರ ದಿನಾಂಕ 28.08.2023 ರಂದು ಒಣಗಿದ 12 ಜಿಂಕೆ ಕೊಂಬುಗಳನ್ನು ಚಾಸಾ–9 ರವರ ಬಳಿ ನೀಡಿ ಪರೀಕ್ಷಾ ವರದಿಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 29.08.2023 ರಂದು ಆರೋಪಿತರ ಸ್ವಇಚ್ಛಾ ಹೇಳಿಕೆಯನ್ನು ಪಡೆಯಲು ಚಾಸಾ–10 ರವರಿಗೆ ನಿವೇದನೆ ಸಲ್ಲಿಸಿದ್ದು, ಚಾಸಾ–10 ರವರು ಆರೋಪಿಗಳ ಸ್ವಇಚ್ಛಾ ಹೇಳಿಕೆಗಳನ್ನು ಪಡೆದು ಹಾಜರುಪಡಿಸಿದ ಹೇಳಿಕೆಗಳನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿನಾಂಕ 28.08.2023 ರಂದು ಚಾಸಾ–9, ಚಾಸಾ–2 ಮತ್ತು 3 ರವರ ಸಮಕ್ಷಮ 12 ಜಿಂಕೆ ಕೊಂಬುಗಳನ್ನು ಚೀಲದ ಸಮೇತ ಬಿಳಿ ಬಟ್ಟೆಯಲ್ಲಿ ಹಾಕಿ ಬಾಯಿಯನ್ನು ಹೊಲಿದು

ಎಸ್ ಎಂಬ ಅಕ್ಷರದಿಂದ ಸೀಲು ಮಾಡಿ ಮಹಜರ್ ಕ್ರಮ ಜರುಗಿಸಿ ನಂತರ ದಿನಾಂಕ 29.08.2023 ರಂದು ಸೀಲು ಮಾಡಿದ ಚೀಲ ಹಾಗೂ 12 ಜಿಂಕೆ ಕೊಂಬುಗಳನ್ನು ಚಾಸಾ–10 ರವರಿಗೆ ನೀಡಿ ಸ್ವೀಕೃತಿಯನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 26.09.2023 ರಂದು ಕೃತ್ಯಕ್ಕೆ ಬಳಸಿದ ದ್ವಿಚಕ್ರ ವಾಹನದ ಬಿ ಎಕ್ಸ್ ಟ್ರ್ಯಾಕ್ಟ್ ನ್ನು ಪಡೆಯಲು ಆರ್.ಟಿ.ಓ. ಕಚೇರಿ, ಚಾಮರಾಜನಗರ ಕ್ಕೆ ಪತ್ರ ವ್ಯವಹಾರ ಮಾಡಿದ್ದು, ಅದೇ ದಿನ ಸದರಿಯವರಿಂದ ಬಿ ಎಕ್ಸ್ ಟ್ರ್ಯಾಕ್ಟ್ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿನಾಂಕ 12.10.2023 ರಂದು ಆರೋಪಿಗಳ ವಿರುದ್ಧ ಆರೋಪ ಸಾಬೀತಾದ ಕಾರಣ ನ್ಯಾಯಾಲಯಕ್ಕೆ ದೂರನ್ನು ಸಲ್ಲಿಸಿರುತ್ತೇನೆ. ಆರೋಪಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ಸಾಕ್ಷಿಯು ಸ್ಥಳ ಮಹಜರ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ಥಳ ಮಹಜರ್ ನ್ನು ನಿಪಿ–1 ಎಂದು, ಸಾಕ್ಷಿಯ ಸಹಿಯನ್ನು ನಿಪಿ–1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ದೂರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ದೂರನ್ನು ನಿಪಿ–2 ಎಂದು, ಸಾಕ್ಷಿಯ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು 65 ಬಿ ಪ್ರಮಾಣ ಪತ್ರದಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, 65 ಬಿ ಪ್ರಮಾಣ ಪತ್ರವನ್ನು ನಿಪಿ–3 ಎಂದು, ಸಾಕ್ಷಿಯ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಚಾಸಾ–9 ರವರಿಂದ ಪಡೆದ ಪರೀಕ್ಷಾ ವರದಿಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪರೀಕ್ಷಾ ವರದಿಯನ್ನು ನಿಪಿ–4 ಎಂದು, ಸಾಕ್ಷಿಯ ಸಹಿಯನ್ನು ನಿಪಿ–4(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಹಜರ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನ್ನು ನಿಪಿ–5 ಎಂದು, ಸಾಕ್ಷಿಯ ಸಹಿಯನ್ನು ನಿಪಿ–5(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಚಾಸಾ–10 ರವರಿಗೆ ಮುದ್ದೆಮಾಲನ್ನು ಹಾಜರುಪಡಿಸಿ ಪಡೆದುಕೊಂಡ ಸ್ವೀಕೃತಿಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ವೀಕೃತಿಯನ್ನು ನಿಪಿ–6 ಎಂದು, ಸಾಕ್ಷಿಯ ಸಹಿಯನ್ನು ನಿಪಿ–6(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಚಾಸಾ–9 ರವರಿಗೆ ನೀಡಿದ ನಿವೇದನೆಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ನಿವೇದನೆಯನ್ನು ನಿಪಿ–7 ಎಂದು, ಸಾಕ್ಷಿಯ ಸಹಿಯನ್ನು ನಿಪಿ–7(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಬಿ ಎಕ್ಸ್ ಟ್ರ್ಯಾಕ್ಟ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಬಿ ಎಕ್ಸ್ ಟ್ರ್ಯಾಕ್ಟ್ ನ್ನು ನಿಪಿ–8 ಎಂದು, ಸಾಕ್ಷಿಯ ಸಹಿಯನ್ನು ನಿಪಿ–8(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಚಾಸಾ–10 ರವರು ನೀಡಿದ ವರದಿಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ವರದಿಯನ್ನು ನಿಪಿ–9 ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ–1ರ ಕಾಲದಲ್ಲಿ ತೆಗೆದ 4 ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–10 ರಿಂದ ನಿಪಿ–13 ಎಂದು ಗುರುತಿಸಲಾಯಿತು.

ಸಾಕ್ಷಿಯು ಚಾಸಾ–9 ರವರಿಗೆ ಪರಿಶೀಲನೆಗೆ ನೀಡಿ, ಪರಿಶೀಲನೆ ಸಮಯದಲ್ಲಿ ತೆಗೆದ ಪೊಟೋಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–14 ಮತ್ತು 15 ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ನಿಪಿ–1ರ ಕಾಲದಲ್ಲಿ ಅಮಾನತ್ತುಪಡಿಸಿಕೊಂಡ 12 ಜಿಂಕೆ ಕೊಂಬುಗಳು ಹಾಗೂ ಒಂದು ತಿಳಿ ಹಸಿರು ಬಣ್ಣದ ಪ್ಲಾಸ್ಟಿಕ್ ಚೀಲವನ್ನು ನೋಡಿ ಗುರುತಿಸಿದ್ದು, 12 ಜಿಂಕೆ ಕೊಂಬುಗಳನ್ನು ಒಟ್ಟಾರೆಯಾಗಿ ಮು.ಮಾ. 1 ಎಂದು, ಪ್ಲಾಸ್ಟಿಕ್ ಚೀಲವನ್ನು ಮು.ಮಾ. 2 ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಗಳನ್ನು ನೋಡಿ ಗುರುತಿಸಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಎಂ. ರಂಜಿತ್ ಕುಮಾರ್)
ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಕೊಳ್ಳೇಗಾಲ.